ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2018–19 ದಿನಾಂಕ: 23–02–2019

# ಪತ್ರಿಕಾ ಆಮಂತ್ರಣ

1. ಸರ್.ಎಂ.ಎನ್. ಕೃಷ್ಣರಾವ್ ಶಾಖಾ ಗ್ರಂಥಾಲಯ ಉದ್ಘಾಟನೆ ಸಮಾರಂಭ
   ಉದ್ಘಾಟಕರು:

   ಡಾ: ಜಿ. ಪರಮೇಶ್ವರ್,
   ಉಪಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ

   ದಿನಾಂಕ: 24–02–2019 ಭಾನುವಾರ, ಬೆಳಿಗ್ಗೆ 10.00 ಗಂಟೆಗೆ
   ಸ್ಥಳ: ಸರ್.ಎಂ. ಎನ್. ಕೃಷ್ಣರಾವ್ ಉದ್ಯಾನವನ, ವಾರ್ಡ್ ನಂ. 153,
   ಬಸವನಗುಡಿ, ಬೆಂಗಳೂರು –4

2. 2018 ನೇ ಸಾಲಿನ ಕರ್ನಾಟಕ ರಾಜ್ಯ ಪೊಲೀಸ್ ವಾರ್ಷಿಕ ಕ್ರೀಡಾಕೂಟ ಉದ್ಘಾಟನೆ
   ಮುಖ್ಯ ಅತಿಥಿ:
   ಜೈಪರ್‌ಕಾಶ್, ನಿವೃತ್ತ ಪೊಲೀಸ್ ಮಹಾ ನಿರ್ದೇಶಕರು, ಕರ್ನಾಟಕ ರಾಜ್ಯ
   ದಿನಾಂಕ: 24–02–2019 ಭಾನುವಾರ ಸಂಜೆ 4–30 ಗಂಟೆಗೆ
   ಸ್ಥಳ: ಕೆ.ಎಸ್.ಆರ್.ಪಿ. ಕ್ರೀಡಾಂಗಣ, ಕೋರಮಂಗಲ, ಬೆಂಗಳೂರು

3. ಶ್ರೀಗಂಧದ ಪ್ರಸ್ತುತ ಸ್ಥಿತಿ ಮತ್ತು ಭವಿಷ್ಯದ ಪ್ರಾಮುಖ್ಯತೆ ಕುರಿತ ರಾಷ್ಟ್ರೀಯ ಸಮಾವೇಶ

   ಉದ್ಘಾಟನೆ:
   ಶ್ರೀ ಹೆಚ್.ಡಿ. ಕುಮಾರಸ್ವಾಮಿ,
   ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ

ಮುಖ್ಯ ಅತಿಥಿಗಳು:

ಡಾ: ಜಿ. ಪರಮೇಶ್ವರ್,

ಉಪಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ

ಎಂ.ಬಿ. ಪಾಟೀಲ್,

ಗೃಹ ಸಚಿವರು

ಕೆ.ಜೆ. ಜಾರ್ಜ್,

ವಾಣಿಜ್ಯ ಮತ್ತು ಕೈಗಾರಿಕಾ ಸಚಿವರು

ಸತೀಶ್ ಜಾರಕಿಹೊಳಿ,

ಅರಣ್ಯ ಮತ್ತು ಪರಿಸರ ಸಚಿವರು

ಶಿವಶಂಕರ ರೆಡ್ಡಿ,

ಕೃಷಿ ಸಚಿವರು

ಶಿವಾನಂದ ಪಾಟೀಲ್,

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

ದಿನಾಂಕ: 25-02-2019 ಸೋಮವಾರ ಬೆಳಿಗ್ಗೆ 10-00 ಗಂಟೆಗೆ

ಸ್ಥಳ: ಜೆ.ಎನ್. ಟಾಟಾ ಆಡಿಟೋರಿಯಂ, ಐ.ಐ.ಎಸ್.ಸಿ. ಕ್ಯಾಂಪಸ್,

ಭಾರತೀಯ ವಿಜ್ಞಾನ ಮಂದಿರ, ಮಲ್ಲೇಶ್ವರಂ, ಬೆಂಗಳೂರು

ವಿ.ಸೂ. ಈ ಕಾರ್ಯಕ್ರಮಕ್ಕೆ ವಾಹನ ವ್ಯವಸ್ಥೆ ಮಾಡಲಾಗಿದ್ದು ವಾಹನ ಅಂದು ಬೆಳಿಗ್ಗೆ 9-15 ಗಂಟೆಗೆ ವಾರ್ತಾ ಸೌಧದಿಂದ ನಿಗಧಿತ ಸ್ಥಳದತ್ತ ತೆರಳಿದೆ. ಹೆಚ್ಚಿನ ಮಾಹಿತಿಗೆ 9035694998, 9945994777 ಸಂಪರ್ಕಿಸಬಹುದು.

4. ಪತ್ರಿಕಾಗೋಷ್ಠಿ:

ಬಂಡೆಪ್ಪ ಖಾಶೆಂಪೂರ,

ಸಹಕಾರ ಸಚಿವರಿಂದ

ದಿನಾಂಕ: 25-02-2019 ಸೋಮವಾರ ಬೆಳಿಗ್ಗೆ 11-00 ಗಂಟೆಗೆ

ಸ್ಥಳ: ಕೊಠಡಿ ಸಂಖ್ಯೆ 443, 4 ನೇ ಮಹಡಿ, ವಿಕಾಸ ಸೌಧ, ಬೆಂಗಳೂರು

# ಪತ್ರಿಕಾ ಪ್ರಕಟಣೆ

## ಕಬ್ಬನ್‌ಪಾರ್ಕ್‌ನಲ್ಲಿ ಈ ಭಾನುವಾರ

**ಬೆಂಗಳೂರು, ಫೆ 23 (ಕರ್ನಾಟಕ ವಾರ್ತೆ)**

ಶ್ರೀ ಚಾಮರಾಜೇಂದ್ರ ಉದ್ಯಾನವನ (ಕಬ್ಬನ್ ಪಾರ್ಕ್) ಒಳರಸ್ತೆಗಳಲ್ಲಿ ಭಾನುವಾರದ ದಿನಗಳಂದು ಸಾರ್ವಜನಿಕ ವಾಹನ ಸಂಚಾರವನ್ನು ನಿಷೇಧಿಸಲಾಗಿದ್ದು, ಉದ್ಯಾನವನದ ಆವರಣದಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರ ಅನುಕೂಲಕ್ಕಾಗಿ ಪ್ರತಿ ಭಾನುವಾರದ ದಿನಗಳಂದು ವಿವಿಧ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿರುತ್ತದೆ. **ದಿನಾಂಕ: 24-02-2019 ರ** ಭಾನುವಾರದಂದು ಶ್ರೀ ಚಾಮರಾಜೇಂದ್ರ ಉದ್ಯಾನವನದ (ಕಬ್ಬನ್ ಉದ್ಯಾನವನ) ಬ್ಯಾಂಡ್ ಸ್ಟ್ಯಾಂಡ್ ಆವರಣ ಹಾಗೂ ಮುಂಭಾಗದ ರಸ್ತೆಯಲ್ಲಿ ಮತ್ತು ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ಈ ಕೆಳಕಂಡ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ. ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಸದರಿ ಕಾರ್ಯಚಟುವಟಿಕೆಗಳ ಸದುಪಯೋಗವನ್ನು ಪಡೆದುಕೊಳ್ಳುವಂತೆ ಈ ಮೂಲಕ ಕೋರಲಾಗಿದೆ.

1) ಕಬ್ಬನ್ ಉದ್ಯಾನವನದ ಆವರಣದಲ್ಲಿ ಬೆಳಿಗ್ಗೆ 8.00 ಗಂಟೆಯಿಂದ ಸಂಜೆ 5.00 ಗಂಟೆಯವರೆಗೆ ಉದ್ಯಾನವನದಲ್ಲಿರುವ ಒಳರಸ್ತೆಗಳಲ್ಲಿ ನಗರ ಭೂಸಾರಿಗೆ ನಿರ್ದೇಶನಾಲಯರವರ ಸಹಯೋಗದೊಂದಿಗೆ **ಬಾಡಿಗೆ ರಹಿತ ಸೈಕಲ್ ಸವಾರಿ ಕಾರ್ಯಕ್ರಮವನ್ನು** ಏರ್ಪಡಿಸಲಾಗಿದೆ.

2) ಕಬ್ಬನ್ ಉದ್ಯಾನವನದ ಒಳರಸ್ತೆಗಳಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ವಯೋವೃದ್ಧರ ಅನುಕೂಲಕ್ಕಾಗಿ ಎರಡು ಸಂಖ್ಯೆಯ **ಪರಿಸರ ಸ್ನೇಹಿ ವಿದ್ಯುತ್‌ಚಾಲಿತ ವಾಹನಗಳ** ಸೇವೆಯನ್ನು ನಿಗಧಿತ ಶುಲ್ಕ ನೀಡಿ ಸಾರ್ವಜನಿಕರು ಪಡೆಯಬಹುದು.

**I ಸ್ಥಳ: ಬ್ಯಾಂಡ್ ಸ್ಟ್ಯಾಂಡ್ ಆವರಣ**

- ಬೆಳಿಗ್ಗೆ 7.00 ಗಂಟೆಯಿಂದ 8.00 ಗಂಟೆಯವರೆಗೆ **ಯೂನಿವರ್ಸ್ ಆರ್ಟ್ ಫೌಂಡೇಶನ್** ಸಂಸ್ಥೆಯ ಸಹಯೋಗದೊಂದಿಗೆ **ಶ್ರೀ ಜಯೀತ ದತ್ತ ಮತ್ತು ತಂಡದವರಿಂದ ಕಥಕ್ ಸಂಗೀತ ನೃತ್ಯ** ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

**ನೀರಿನ ಅದಾಲತ್.**

ಬೆಂಗಳೂರು ಜಲಮಂಡಲಿಯ ಸಕಾನಿಅ (ದಕ್ಷಿಣ-4) ಮತ್ತು ಸಕಾನಿಅ (ವಾಯುವ್ಯ-1) ಉಪವಿಭಾಗಗಳಲ್ಲಿ ಸೋಮವಾರ ದಿನಾಂಕ: 25.02.2019 ರಂದು ನೀರಿನ ಬಿಲ್ಲು, ನೀರು ಮತ್ತು ಒಳಚರಂಡಿ ಸಂಪರ್ಕ ಕಲ್ಪಿಸುವಲ್ಲಿನ ವಿಳಂಬ, ಗೃಹ ಬಳಕೆಯಿಂದ ಗೃಹೇತರ ಬಳಕೆ ಪರಿವರ್ತನೆ ವಿಳಂಬ ಮತ್ತಿತರ ಕುಂದುಕೊರತೆಗಳಿಗೆ ಸಂಬಂಧಿಸಿದಂತೆ ನೀರಿನ ಅದಾಲತ್‌ಅನ್ನು ಬೆಳಗ್ಗೆ 9.30 ರಿಂದ 11:00 ಗಂಟೆಯವರೆಗೆ ನಡೆಸಲಾಗುತ್ತದೆ.

ಸಕಾನಿಅ(ದಕ್ಷಿಣ-4) ಉಪವಿಭಾಗ ವ್ಯಾಪ್ತಿಗೆ ಬರುವ ಹೆಚ್.ಎಸ್.ಆರ್ ಲೇಔಟ್, ಕೋಡಿಚಿಕ್ಕನಹಳ್ಳಿ, ಸೇವಾಠಾಣೆಗಳಿಗೆ ಸಂಬಂಧಿಸಿದ ವಿವಾದಗಳನ್ನು ವಾಟರ್ ಟ್ಯಾಂಕ್ ಹತ್ತಿರ, 2ನೇ ಅಡ್ಡರಸ್ತೆ, 9ನೇ ಮುಖ್ಯರಸ್ತೆ, ಬಿ.ಟಿ.ಎಂ 2ನೇ ಹಂತ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ಕಚೇರಿಯಲ್ಲಿ ಪರಿಶೀಲಿಸಿ ಬಗೆಹರಿಸಲಾಗುತ್ತದೆ.

ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಬೇಕಾದ ದೂರವಾಣಿ ಸಂಖ್ಯೆ: ಕಾರ್ಯನಿರ್ವಾಹಕ ಅಭಿಯಂತರರು (ದಕ್ಷಿಣ): 22945143. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ದಕ್ಷಿಣ-4) ಉಪವಿಭಾಗ: 40977432.

ಸಕಾನಿಅ(ವಾಯುವ್ಯ-1) ಉಪವಿಭಾಗ ವ್ಯಾಪ್ತಿಗೆ ಬರುವ ಕೇತಮಾರನಹಳ್ಳಿ, ಮಹಾಲಕ್ಷ್ಮೀ ಲೇಔಟ್, ರಾಜಾಜಿನಗರ 1 & 2, ನಂದಿನಿ ಲೇಔಟ್-1, ಸೇವಾಠಾಣೆಗಳಿಗೆ ಸಂಬಂಧಿಸಿದ ವಿವಾದಗಳನ್ನು 4ನೇ ಅಡ್ಡರಸ್ತೆ, ರಾಜಾಜಿನಗರ 1ನೇ 'ಎನ್' ಬ್ಲಾಕ್, ವಿದ್ಯಾವರ್ಧಕ ಶಾಲೆ ಹಿಂಭಾಗ (ಕೇತಮಾರನ ಹಳ್ಳಿ ವಾಟರ್ ಟ್ಯಾಂಕ್) ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ಕಚೇರಿಯಲ್ಲಿ ಪರಿಶೀಲಿಸಿ ಬಗೆಹರಿಸಲಾಗುತ್ತದೆ.

ಹೆಚ್ಚಿನ ಮಾಹಿತಿಗೆ ಸಂಪರ್ಕಿಸಬೇಕಾದ ದೂರವಾಣಿ ಸಂಖ್ಯೆ: ಕಾರ್ಯನಿರ್ವಾಹಕ ಅಭಿಯಂತರರು (ವಾಯುವ್ಯ-1): 23491123. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ವಾಯುವ್ಯ-1) ಉಪವಿಭಾಗ: 22945176.

ಕುಂದು ಕೊರತೆಗಳಿಗೆ ಸಂಬಂಧಿಸಿದಂತೆ ಮಂಡಲಿಯ 24/7 ದೂರು ನಿರ್ವಹಣಾ ಕೇಂದ್ರದ ದೂರವಾಣಿ ಸಂಖ್ಯೆ:22238888, ಸಹಾಯವಾಣಿ 1916 ಹಾಗೂ ವಾಟ್ಸ್‌ಆಪ್ ಸಂಖ್ಯೆ:8762228888 ಗೆ ಸಂಪರ್ಕಿಸಬಹುದಾಗಿದೆ.

ಸಾರ್ವಜನಿಕರು ಮೇಲಿನ ಸಮಸ್ಯೆಗಳನ್ನು ಬಗೆಹರಿಸಿಕೊಳ್ಳಲು ಈ ಅದಾಲತ್ ಸೌಲಭ್ಯ ಬಳಸಿಕೊಳ್ಳ ಬಹುದಾಗಿದೆ.

**BWSSB:Water Adalath in AEE(South-4) & AEE(North West-1) sub divisions on February 25th**

BWSSB water Adalath is held on 25.02.2019 in AEE(South-4) & AEE(North-West-1) sub divisions from 9:30am to 11.00am to settle the grievances concerned with the water billing, delay in providing water supply & sanitary connections, delay in converting from domestic connection to non domestic connection & other related issues.

The disputes of consumers of HSR Layout, Kodichikkanahalli Service station coming under AEE(South-4) sub division, will be discussed in detail & problems will be settled in the office of the Assistant Executive Engineer (South-4) sub division, Near Water Tank, 2nd Cross, 9th Main, BTM 2nd Stage.

Details regarding the adalath can be obtained by the office of EE (South): 22945143, or office of AEE(South-4): 40977432.

The disputes of consumers of Kethamaranahalli, Mahalakshmi layout, Rajajinagar 1&2, Nandini Layout-1, Service station coming under AEE (North West-1) sub division, will be discussed in detail & problems will be settled in the office of the Assistant Executive Engineer (North West-1) sub division, 4th Cross, Rajajinagar 1st ‘N’ Block, Behind Vidyavardhaka School (Kethamaranahalli Water Tank).

Details regarding the adalath can be obtained by the office of EE (North West-1): 23491123, or office of AEE (North West-1): 22945176.

For any problems regarding the water supply and all, publics can contact 24x7 call centre: 22238888 helpline number: 1916 & whats app no: 8762228888. Public can utilize this adalath facilities to solve the problems regarding water supply.

## ಉದ್ಯಮಶೀಲತಾ ಅಭಿವೃದ್ಧಿ ಕಾರ್ಯಕ್ರಮದ ಸ್ಥಳ ಬದಲಾವಣೆ

**ಬೆಂಗಳೂರು, ಫೆ 22 (ಕರ್ನಾಟಕ ವಾರ್ತೆ)**

2013–18 ರ ನೂತನ ಜವಳಿ ನೀತಿ ಯೋಜನೆಯಡಿ ಹೊಸದಾಗಿ ಜವಳಿ ಉದ್ದಿಮೆಗಳ ಘಟಕಗಳನ್ನು ಸಣ್ಣ ಮತ್ತು ಅತಿಸಣ್ಣ ಎಂಎಸ್ಎಂಇ ಘಟಕಗಳನ್ನು ಸ್ಥಾಪನೆಗೆ ಪ್ರೋತ್ಸಾಹಿಸಲು ಆಸಕ್ತಿಯುಳ್ಳ ಬಾವಿ ಜವಳಿ ಉದ್ದಿಮೆದಾರರಿಗೆ 02 ದಿನಗಳ ಉದ್ಯಮಶೀಲತಾ ಅಭಿವೃದ್ಧಿ ಕಾರ್ಯಕ್ರಮವನ್ನು ಜಂಟಿ ನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ, ದಕ್ಷಿಣ ವಿಭಾಗ/ವಲಯ, ಬೆಂಗಳೂರು ವತಿಯಿಂದ ಹಮ್ಮಿಕೊಳ್ಳಲಾಗಿದೆ. ದಿನಾಂಕ 01–03–2019 ರಂದು ಹೋಟೆಲ್ ಮೌರ್ಯ, ರೇಸ್‌ಕೋರ್ಸ್ ರಸ್ತೆ, ಆನಂದರಾವ್ ಸರ್ಕಲ್ ಬೆಂಗಳೂರು ಇಲ್ಲಿ ಜವಳಿ ಉದ್ದಿಮೆಯಲ್ಲಿ ಅನುಭವ ಹೊಂದಿರುವ ಸಂಪನ್ಮೂಲ ವ್ಯಕ್ತಿಗಳಿಂದ ಕಾರ್ಯಾಗಾರವನ್ನು ಏರ್ಪಡಿಸಲು ಉದ್ದೇಶಿಸಲಾಗಿತ್ತು.

ಸದರಿ ಕಾರ್ಯಕ್ರಮದ ಸ್ಥಳ ಬದಲಾಗಿದ್ದು "ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಸಂಸ್ಥೆ (KASSIA) 2/106, 17 ನೇ ಕ್ರಾಸ್, (ಡಿ ಮಾರ್ಟ್ ಹತ್ತಿರ) ಮಾಗಡಿ ಕಾರ್ಡ್ ರಸ್ತೆ, ವಿಜಯನಗರ, ಬೆಂಗಳೂರು ಇಲ್ಲಿ ಏರ್ಪಡಿಸಲು ಉದ್ದೇಶಿಸಲಾಗಿದೆ.

ಹೆಚ್ಚಿನ ವಿವರಗಳಿಗೆ ಜಂಟಿ ನಿರ್ದೇಶಕರ ಕಚೇರಿ, ಕೈಮಗ್ಗ ಮತ್ತು ಜವಳಿ ಇಲಾಖೆ, ದಕ್ಷಿಣ ವಲಯ, (ಬೆಂಗಳೂರು) ನಂ. 39/2, 4 ನೇ ಮಹಡಿ, ಎಎಸ್‌ವಿಎನ್‌ವಿ ಭವನ, ಕೆಂಪೇಗೌಡ ರಸ್ತೆ, ಬೆಂಗಳೂರು –560009 ದೂರವಾಣಿ 080—22382666 ಇ–ಮೇಲ್ jdsouthdvn@gmail.com ನಲ್ಲಿ ಸಂಪರ್ಕಿಸಬಹುದಾಗಿದೆ.

## ಸಚಿವರ ಪ್ರವಾಸ

**ಬೆಂಗಳೂರು, ಫೆ 22 (ಕರ್ನಾಟಕ ವಾರ್ತೆ)**

ಗಣಿ ಮತ್ತು ಭೂ ವಿಜ್ಞಾನ ಸಚಿವ ರಾಜಶೇಖರ ಬಿ. ಪಾಟೀಲ ಅವರು ಫೆಬ್ರವರಿ 26 ರಿಂದ 27 ರವರೆಗೆ ಯಾದಗಿರಿ, ಕಲಬುರಗಿ ಮತ್ತು ಬೀದರ್ ಜಿಲ್ಲೆಗಳಲ್ಲಿ ಪ್ರವಾಸಕೈಗೊಂಡು ಫೆಬ್ರವರಿ 27 ರಂದು ಕೇಂದ್ರಸ್ಥಾನಕ್ಕೆ ಹಿಂತಿರುಗುವರು.

# ಬೆಂಗಳೂರು ಗ್ರಾಮಾಂತರ ಪ್ರಾದೇಶಿಕ ಸಾರಿಗೆ ಪ್ರಾಧಿಕಾರದ ಸಭೆ

**ಬೆಂಗಳೂರು, ಫೆ 22 (ಕರ್ನಾಟಕ ವಾರ್ತೆ)**

ದಿನಾಂಕ 19-12-2019 ರಂದು ಅಧ್ಯಕ್ಷರು, ಪ್ರಾದೇಶಿಕ ಸಾರಿಗೆ ಪ್ರಾಧಿಕಾರ ಬೆಂಗಳೂರು(ಗ್ರಾಮಾಂತರ) ಹಾಗೂ ಜಿಲ್ಲಾಧಿಕಾರಿಗಳು ಬೆಂಗಳೂರು (ಗ್ರಾಮಾಂತರ) ಅವರ ಜಿಲ್ಲಾ ಸಂಕೀರ್ಣ ಭವನ, ಬೀರಸಂದ್ರ, ದೇವನಹಳ್ಳಿ ತಾ: ಬೆಂಗಳೂರು ಗ್ರಾಮಾಂತರ ಜಿಲ್ಲೆ ಇಲ್ಲಿ ನಿಗದಿಪಡಿಸಿದ ಪ್ರಾದೇಶಿಕ ಸಾರಿಗೆ ಪ್ರಾಧಿಕಾರ, ಬೆಂಗಳೂರು(ಗ್ರಾಮಾಂತರ)ದ ಸಭೆಯನ್ನು ಕಾರಣಾಂತರಗಳಿಂದ ಅಧ್ಯಕ್ಷರ ಆದೇಶದಂತೆ 27-02-2019 ರಂದು ಬೆಳಿಗ್ಗೆ 11-00 ಗಂಟೆಗೆ ಮೂಂದೂಡಲಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

# ಎಸಿಬಿ ದಾಳಿ

**ಬೆಂಗಳೂರು, ಫೆ 22 (ಕರ್ನಾಟಕ ವಾರ್ತೆ)**

ಬೆಂಗಳೂರು ನಗರದ ನಿವಾಸಿಯೊಬ್ಬರಿಗೆ ಸೇರಿದ ನಿವೇಶನದ ಮರು ಹಂಚಿಕೆ ಮತ್ತು ಮರು ಮಂಜೂರಾತಿ ಪ್ರಕ್ರಿಯೇಯ ಸಮಯದಲ್ಲಿ ಬಂದಿರುವ ತಕರಾರು ಅರ್ಜಿಯನ್ನು ಇತ್ಯರ್ಥಪಡಿಸುವ ಸಲುವಾಗಿ ಶ್ರೀ.ಬಸವರಾಜು, ಸರ್ವೆಯರ್, ಆರ್ & ಆರ್ ವಿಭಾಗ, ಬಿಡಿಎ ಕೇಂದ್ರ ಕಛೇರಿ, ಬೆಂಗಳೂರು ಇವರು ರೂ.10,00,000/- ಲಂಚದ ಹಣಕ್ಕೆ ಬೇಡಿಕೆ ಇಟ್ಟಿರುತ್ತಾರೆ.

ದಿನಾಂಕ:23-02-2019 ರಂದು ಶ್ರೀ ಬಸವರಾಜು, ಖಾಸಗಿ ವ್ಯಕ್ತಿ, ಬಿಡಿಎ ಕೇಂದ್ರ ಕಛೇರಿ, ಬೆಂಗಳೂರು ಇವರು ಶ್ರೀ ಬಸವರಾಜು, ಸರ್ವೆಯರ್ ಇವರ ಪರವಾಗಿ ರೂ.5,00,000/- ನಗದು ಮತ್ತು ರೂ.5,00,000/- ಮೊತ್ತದ ಚೆಕ್‌ನ್ನು ಸ್ವೀಕರಿಸುತ್ತಿದ್ದ ಸಂದರ್ಭದಲ್ಲಿ ಭ್ರಷ್ಟಾಚಾರ ನಿಗ್ರಹ ದಳ ಬೆಂಗಳೂರು ನಗರ ಠಾಣೆಯ ಅಧಿಕಾರಿಗಳು ನಡೆಸಿದ ಕಾರ್ಯಾಚರಣೆಯಲ್ಲಿ ಸಿಕ್ಕಿಬಿದ್ದಿರುತ್ತಾರೆ. ಶ್ರೀ ಬಸವರಾಜು, ಸರ್ವೆಯರ್ ಮತ್ತು ಶ್ರೀ ಬಸವರಾಜು, ಖಾಸಗಿ ವ್ಯಕ್ತಿ ರವರುಗಳನ್ನು ದಸ್ತಗಿರಿ ಮಾಡಿ ಲಂಚದ ಹಣವನ್ನು ವಶಪಡಿಸಿಕೊಳ್ಳಲಾಗಿದೆ, ಪ್ರಕರಣದ ತನಿಖೆ ಮುಂದುವರೆದಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.